ಇ) ಸಿಂಧನೂರು ತಾಲ್ಲೂಕು ನೀರಾವರಿ ಇಲಾಖೆ ರಸ್ತೆಗಳ ಅಭಿವೃದ್ಧಿ ಪಡಿಸಲು ಸರ್ಕಾರ ನಿಗಧಿಪಡಿಸಿದ ಹಣವೆಷ್ಟು;

ಈ) ನೀರು ಸರಬರಾಜು ಮಾಡಲು ಗ್ಯಾಂಗ್ ಮ್ಯಾನ್‌ಗಳಿಲ್ಲದೆಯೇ ತುಂಗಭದ್ರ ಜಲಾಶಯದ ವ್ಯಾಪ್ತಿಯಲ್ಲಿ ಬರುವ ರೈತ ಸಮುದಾಯಕ್ಕೆ ತೊಂದರೆಯಾದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್.ಕೆ.ಪಾಟೀಲ್ (ಬೃಹತ್ ನೀರಾವರಿ ಸಚಿವರು):

ಅ) ಹೌದು, 2000-2001 ಆಯವ್ಯಯದಲ್ಲಿ ಸೂಕ್ತ ಅವಕಾಶ ಕಲ್ಪಿಸಲು ಉದ್ದೇಶಿಸಿದೆ.

ಆ) ಪ್ರಸ್ತಾವನೆ ಇರುತ್ತದೆ

ಇ) 1999-2000ರ ಸಾಲಿನಲ್ಲಿ ನಿಗಧಿಪಡಿಸಿರುವ ಹಣ ರೂ.32.50 ಲಕ್ಷಗಳು.

ಈ) ಹೌದು, ಪರ್ಯಾಯ ವ್ಯವಸ್ಥೆಗಳನ್ನು ಪರಿಶೀಲಿಸಲಾಗುತ್ತಿದೆ.

ಸಿಂಧನೂರು ತಾಲ್ಲೂಕಿನ ವಳಬಳ್ಳಾರಿ ಚನ್ನಬಸವೇಶ್ವರ ಯೋಜನೆ.

163 (142)

ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಬೃಹತ್ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ತಾಲ್ಲೂಕು ವಳಬಳ್ಳಾರಿ ಶ್ರೀ ಚನ್ನಬಸವೇಶ್ವರ ಯೋಜನೆಯಿಂದ ಎಷ್ಟು ಎಕರೆ ನೀರಾವರಿಯಾಗುವುದು; ಇದಕ್ಕೆ ತಗಲುವ ಒಟ್ಟು ಅಂದಾಜು ಹಣವೆಷ್ಟು; ಈಗ ಯಾವ ಹಂತದಲ್ಲಿ ಈ ಯೋಜನೆ ಇದೆ?

ಶ್ರೀ ಹೆಚ್.ಕೆ.ಪಾಟೀಲ್ (ಬೃಹತ್ ನೀರಾವರಿ ಸಚಿವರು):

ಅ) ತುಂಗಭದ್ರಾ ಎಡದಂಡೆ ಕಾಲುವೆಯ ವಿತರಣಾ ನಾಲೆ 54 ರಡಿಯಲ್ಲಿ ಬರುವ ಉಪ ವಿತರಣಾ ನಾಲೆ 9 ಆರ್ ಕೊನೆಯ ಬಾಗದ ಸುಮಾರು 6235 ಎಕರೆಯಷ್ಟು ನೀರಿನಿಂದ ಬಳಲುತ್ತಿರುವ ಪ್ರದೇಶಕ್ಕೆ ತುಂಗಭದ್ರಾ ನದಿಯಿಂದ ಎರಡು ಹಂತದಲ್ಲಿ ನೀರೆತ್ತಿ ಕೊಡುವ ಯೋಜನೆಯನ್ನು ಉದ್ದೇಶಿಸಿ ರೂ.975.00 ಲಕ್ಷಗಳಿಗೆ ರೇಖಾ ಅಂದಾಜನ್ನು ಸಿದ್ದಪಡಿಸಲಾಗಿದೆ. ಇದರ ವಿವರವಾದ ಪರಿಶೀಲನೆಯ ನಂತರ ಆಗತ್ಯ

ಕ್ರಮ ತೆಗೆದುಕೊಳ್ಳಲಾಗುವುದು.

ಸಿಂಧನೂರು ತಾಲ್ಲೂಕಿನ ಪೋಲೀಸ್ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ.

164 (143)

ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಸಿಂಧನೂರು ತಾಲ್ಲೂಕಿನಲ್ಲಿರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ಈ ಠಾಣೆಗಳಲ್ಲಿ ಸಿಬ್ಬಂದಿ ವರ್ಗದವರ ಕೊರತೆ ಇದೆಯೇ?

ಆ. ಸಿಂಧನೂರು ತಾಲ್ಲೂಕು ಗ್ರಾಮೀಣ ಪೊಲೀಸ್ ಠಾಣೆಯನ್ನು ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು):

ಅ. ಸಿಂಧನೂರು ತಾಲ್ಲೂಕಿನಲ್ಲಿ ಮೂರು ಪೊಲೀಸ್ ಠಾಣೆಗಳು ಇವೆ, ಸಿಬ್ಬಂದಿ ಕೊರತೆ ಇಲ್ಲ.

ಆ. ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಅನಧಿಕೃತ ಮದ್ಯ ಮಾರಾಟ

166 (182)

ಶ್ರೀ ಹೊನ್ನಳ್ಳಿ ಜಬ್ಬರ್‌ಖಾನ್ ಹೈಯತ್ ಖಾನ್ (ಹುಬ್ಬಳ್ಳಿ): ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಲ್ಲಿ ಅನಧಿಕೃತವಾಗಿ ಮದ್ಯ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು? (ಪತ್ತೆ ಹಚ್ಚಿದ ಪ್ರಕರಣಗಳ ವಿವರ ನೀಡುವುದು)